ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

21

**ಪತ್ರಿಕಾ ತುಣುಕುಗಳು**
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರೈತರ – ಕೃಷಿ ...

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 07/12/2020

# ನಾಳೆ ಕರ್ನಾಟಕ ಬಂದ್

## ಭಾರತ್ ಬಂದ್‌ಗೆ ಪೂರಕವಾಗಿ ಹೋರಾಟ

**ಬೆಂಗಳೂರು:** ಕೇಂದ್ರ ಸರ್ಕಾರದ ಮೂರು ಕೃಷಿ ಕಾಯ್ದೆಗಳನ್ನು ವಿರೋಧಿಸಿ ಡಿ.8ರಂದು ನಡೆಯಲಿರುವ 'ಭಾರತ್ ಬಂದ್' ಗೆ ಕರ್ನಾಟಕದಲ್ಲೂ ಬೆಂಬಲ ವ್ಯಕ್ತವಾಗಿದೆ. ರಾಜ್ಯದಲ್ಲೂ ರೈತ ಸಂಘಟನೆಗಳು ಮಂಗಳವಾರ ಕರ್ನಾಟಕ ಬಂದ್ ನಡೆಸಲಿವೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ರೈತ ಸಂಘದ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್, ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರಬೂರು ಶಾಂತಕುಮಾರ್, ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಮುಖಂಡ ಬಡಗಲಪುರ ನಾಗೇಂದ್ರ 'ಕರ್ನಾಟಕ ಬಂದ್' ಸಿದ್ಧತೆ ನಡೆಸಲಾಗಿದೆ ಎಂದು ಹೇಳಿದ್ದಾರೆ. ಹಾಗೆಯೇ ಬುಧವಾರ ವಿಧಾನಸೌಧಕ್ಕೆ ಮುತ್ತಿಗೆ ಹಾಕುತ್ತೇವೆ. ಹಾಗೆಯೇ ಬಾರುಕೋಲು ಚಳವಳಿ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಬಂದ್‌ಗೆ ಕಾರ್ಮಿಕ ಸಂಘಟನೆಗಳು ಸೇರಿದಂತೆ ಹಲವು ಸಂಘಟನೆಗಳು ಇದಕ್ಕೆ ಬೆಂಬಲ ನೀಡಿವೆ. ಆಯಾ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿ ರೈತಪರ ಸಂಘಟಗಳ ಕಾರ್ಯಕರ್ತರು ಪ್ರತಿಭಟನೆ ನಡೆಸಲಿದ್ದಾರೆ ಎಂದು ನಾಯಕರು ತಿಳಿಸಿದ್ದಾರೆ.

**ಅನಿರ್ದಿಷ್ಟಾವಧಿ ಪ್ರತಿಭಟನೆ:** ಕೇಂದ್ರ ಮತ್ತು ರಾಜ್ಯ ಸರ್ಕಾರದ ರೈತ, ಕಾರ್ಮಿಕ ವಿರೋಧಿ ನೀತಿ ಖಂಡಿಸಿ 'ಐಕ್ಯ ಹೋರಾಟ ವೇದಿಕೆ' ಡಿ. 7ರಂದು ಅನಿರ್ದಿಷ್ಟಾವಧಿ ಪ್ರತಿಭಟನೆ ಹಮ್ಮಿಕೊಂಡಿದೆ. ಮೌರ್ಯ ವೃತ್ತದಲ್ಲಿರುವ ಗಾಂಧಿ ಪ್ರತಿಮೆ ಎದುರು ಧರಣಿ ನಡೆಯಲಿದೆ ಎಂದು ರೈತ ಮುಖಂಡ ಬಡಗಲಪುರ ನಾಗೇಂದ್ರ ಹೇಳಿದ್ದಾರೆ.

**ರೈತ ಸಂಘಟನೆಗಳಿಂದ ನಿರ್ಧಾರ**

**ಬಂದ್‌ಗೆ ಕಾರ್ಮಿಕ ಸಂಘಟನೆಗಳಿಂದಲೂ ಬೆಂಬಲ**

**ಡಿ.9ಕ್ಕೆ ವಿಧಾನಸೌಧ ಮುತ್ತಿಗೆ, ಬಾರುಕೋಲು ಚಳವಳಿ**

### ಭಾರತ್ ಬಂದ್‌ಗೂ ಬೆಂಬಲ

ದೇಶದ ಒಟ್ಟು 40ಕ್ಕೂ ಹೆಚ್ಚು ರೈತ ಸಂಘಟನೆಗಳು ಕರೆ ನೀಡಿರುವ ಭಾರತ್ ಬಂದ್‌ಗೆ ಕಾಂಗ್ರೆಸ್, ಟಿಆರ್‌ಎಸ್, ಟಿಎಂಸಿ, ಆಪ್, ಡಿಎಂಕೆ, ಆರ್‌ಜೆಡಿ, ಸಮಾಜವಾದಿ ಪಾರ್ಟಿ, ಎನ್‌ಸಿಪಿ ಸೇರಿದಂತೆ 8 ಪ್ರತಿಪಕ್ಷಗಳು ಬೆಂಬಲ ನೀಡಿವೆ. ಈ ಸಂಬಂಧ ಜಂಟಿ ಹೇಳಿಕೆ ಬಿಡುಗಡೆ ಮಾಡಿರುವ ಪ್ರತಿಪಕ್ಷ ನಾಯಕರಾದ ಸೋನಿಯಾ ಗಾಂಧಿ, ಶರದ್ ಪವಾರ್, ಎಂ.ಕೆ.ಸ್ಟಾಲಿನ್, ಅಖಿಲೇಶ್ ಯಾದವ್, ತೇಜಸ್ವಿ ಯಾದವ್ ಅವರು, ರೈತರ ಬೆನ್ನಿಗೆ ನಾವು ನಿಂತಿದ್ದೇವೆ. ಕೇಂದ್ರ ಸರ್ಕಾರ ರೈತ ವಿರೋಧಿ ಕಾನೂನುಗಳನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸುತ್ತಿದ್ದೇವೆ ಎಂದಿದ್ದಾರೆ. ಇದರ ಜತೆಗೆ ದೇಶದ ಪ್ರಮುಖ ಕಾರ್ಮಿಕ ಸಂಘಟನೆಗಳೂ ಬಂದ್‌ಗೆ ಬೆಂಬಲ ನೀಡಿವೆ.